# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1210 |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 17.12.2025 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪೂರ್ಣಗೊಂಡಿರುವ ಪೋಡಿ ಮುಕ್ತ ಗ್ರಾಮಗಳ ಸಂಖ್ಯೆ ಎಷ್ಟು; | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪೋಡಿ ಮುಕ್ತ ಗ್ರಾಮ ಯೋಜನೆಯಡಿಯಲ್ಲಿ ಅಳತೆ ಪೂರ್ಣಗೊಂಡ ಗ್ರಾಮಗಳ ಮತ್ತು ಬಾಕಿ ಗ್ರಾಮಗಳ ವಿವರ ಈ ಕೆಳಕಂಡಂತಿದೆ. |
| ಆ) | ಈ ಮೇಲ್ಕಂಡ ಜಿಲ್ಲೆಗಳಲ್ಲಿ ಎಷ್ಟು ಗ್ರಾಮಗಳನ್ನು ಪೋಡಿ ಮುಕ್ತ ಗ್ರಾಮಗಳೆಂದು ಘೋಷಿಸಲಾಗಿದೆ ಹಾಗೂ ಬಾಕಿ ಇರುವ ಗ್ರಾಮಗಳ ಸಂಖ್ಯೆ ಎಷ್ಟು; | <table><tr><th>ಜಿಲ್ಲೆ</th><th>ಅಳತೆ ಪೂರ್ಣಗೊಂಡ ಗ್ರಾಮಗಳು</th><th>ಬಾಕಿ ಗ್ರಾಮಗಳು</th></tr><tr><td>ಕಲಬುರ್ಗಿ</td><td>574</td><td>359</td></tr><tr><td>ಯಾದಗಿರಿ</td><td>365</td><td>232</td></tr></table> |
| ಇ) | ಬಾಕಿ ಇರುವ ಗ್ರಾಮಗಳಲ್ಲಿ ರೈತರು ಸ್ವಯಂ ಪ್ರೇರಿತರಾಗಿ ಅರ್ಜಿ ಸಲ್ಲಿಸಿದ್ದರೂ ಸಹ ಪೋಡಿ ಕಾರ್ಯಗಳನ್ನು ಕೈಗೊಳ್ಳದಿರಲು ಕಾರಣವೇನು; | ಪೋಡಿ ಮುಕ್ತ ಗ್ರಾಮ ಯೋಜನೆಯಡಿ ಪೋಡಿಗಾಗಿ ರೈತರು ಯಾವುದೇ ಅರ್ಜಿ ಸಲ್ಲಿಸುವ ಅವಶ್ಯಕತೆಯಿರುವುದಿಲ್ಲ. ಇಲಾಖೆಯಿಂದಲೇ ಸ್ವಯಂಪ್ರೇರಿತವಾಗಿ ಬಹುಮಾಲೀಕತ್ವ ಪಹಣಿಗಳ ಗ್ರಾಮಗಳನ್ನು ಆಯ್ಕೆಮಾಡಿಕೊಂಡು ಪೋಡಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತದೆ.<br>ಈ ಯೋಜನೆಗೆ ಆಯ್ಕೆಯಾಗದೆ ಬಾಕಿ ಇರುವ ಗ್ರಾಮಗಳಲ್ಲಿ ರೈತರು ಯಾವುದೇ ಅಳತೆ ಕೋರಿ ಅರ್ಜಿ ಸಲ್ಲಿಸಿದಲ್ಲಿ ನಿಯಮಾನುಸಾರ ಅಳತೆ ಕಾರ್ಯ ಕೈಗೊಳ್ಳಲಾಗುತ್ತದೆ. |
| ಈ) | ಈ ಜಿಲ್ಲೆಗಳಲ್ಲಿ ಪೋಡಿ ಕಾರ್ಯವನ್ನು ಪೂರ್ಣಗೊಳಿಸಲು ಸಮಯ ನಿಗಧಿಪಡಿಸಲಾಗಿದೆಯೇ ಹಾಗೂ ನಿಗಧಿತ ಸಮಯದಲ್ಲಿ ಪೋಡಿ ಕಾರ್ಯವನ್ನು ಪೂರ್ಣಗೊಳಿಸದಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ | ರಾಜ್ಯದಲ್ಲಿ ಪೋಡಿ ಮುಕ್ತ ಗ್ರಾಮ ಯೋಜನೆಯಲ್ಲಿ ಪೋಡಿ ಕಾರ್ಯವನ್ನು ಪೂರ್ಣಗೊಳಿಸಲು ಯಾವುದೇ ಸಮಯ (ಕಾಲ ಮಿತಿ) ನಿಗದಿಪಡಿಸಲಾಗಿರುವುದಿಲ್ಲ.<br>ಪ್ರಥಮ ಆದ್ಯತೆಯಾಗಿ ಸಾರ್ವಜನಿಕರು ಶುಲ್ಕ ಪಾವತಿಸಿ ಸಲ್ಲಿಸುವ 11ಇ, ತತ್ಕಾಲ್ ಪೋಡಿ, ಅಲಿನೇಷನ್, ಹದ್ದುಬಸ್ತು, ಇ-ಸ್ವತ್ತು, ಕೋರ್ಟ್ ಪ್ರಕರಣಗಳನ್ನು ಅಳತೆ |

| | |
|---|---|
| ಕೈಗೊಳ್ಳುತ್ತದೆ? | ಮಾಡಲಾಗುತ್ತದೆ. ಸದರಿ ಪ್ರಕರಣಗಳು ಹೆಚ್ಚಿಗೆ ಇಲ್ಲದಿದ್ದಲ್ಲಿ ಆದ್ಯತೆ ಮೇರೆಗೆ ಪೋಡಿ ಮುಕ್ತ ಗ್ರಾಮ ಅಭಿಯಾನದಡಿ ಭೂಮಾಪಕರ ಲಭ್ಯತೆ ಆಧಾರದ ಮೇಲೆ ಗ್ರಾಮಗಳನ್ನು ಹಂತ ಹಂತವಾಗಿ ಆಯ್ಕೆ ಮಾಡಿಕೊಂಡು ಅಳತೆ ಕಾರ್ಯ ಪೂರೈಸಲು ಕ್ರಮ ಕೈಗೊಳ್ಳಲಾಗುತ್ತದೆ. |

**<u>ಸಂಖ್ಯೆ: ಕಂಇ 229 ಎಸ್‌ಎಸ್‌ಸಿ 2025</u>**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು